154 ಪ್ರ ನಿ-330 (97)

184

**ಮಾನ್ಯ ಶ್ರೀ ಕೆ. ಎ. ತಿಪ್ಪೇಸ್ವಾಮಿ, ವಿಧಾನ ಪರಿಷತ್ ಸದಸ್ಯರು, ಇವರ ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ**

**ಸೂಚನೆ** : ರಾಜ್ಯದ ಗೌರವಾನ್ವಿತ ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ರಾಜ್ಯದಲ್ಲಿ ಅಭಿವೃದ್ಧಿ ವಿಚಾರವಾಗಿ ಸರ್ಕಾರದಲ್ಲಿ ಯಾವುದೇ ಅನುದಾನದ ಕೊರತೆಯಿಲ್ಲ ಹಾಗೂ ಅನುದಾನ ಬಿಡುಗಡೆ ಮಾಡಿ ರಾಜ್ಯದ ಸಮಗ್ರ ಅಭಿವೃದ್ಧಿ ವಿಚಾರದಲ್ಲಿ ಯಾವುದೇ ತಾರತಮ್ಯ ಮಾಡುವುದಿಲ್ಲವೆಂದು ಸಾರ್ವಜನಿಕ ಸಭೆ ಸಮಾರಂಭಗಳಲ್ಲಿ ಹಾಗೂ ದೃಶ್ಯ ಮತ್ತು ಪತ್ರಿಕಾ ಮಾದ್ಯಮಳಿಗೆ ಹೇಳಿಕೆ ನೀಡಿರುತ್ತಾರೆ. ಅದರಂತೆ, ಮಂಡ್ಯ ಜಿಲ್ಲೆಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಬರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಮೂಲಭೂತ ಸೌಕರ್ಯ ಹಾಗೂ ಇನ್ನಿತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದು ಅವಶ್ಯವಿದ್ದು, ಎಸ್.ಎಫ್.ಸಿ. ಯೋಜನೆಯಡಿ ಅನುದಾನ ಬಿಡುಗಡೆಗಾಗಿ ಆರ್ಥಿಕ ಇಲಾಖೆಯಲ್ಲಿ ಕಡತವು ಬಾಕಿ ಇದ್ದು, ಸಲ್ಲಿಕೆಯಾಗಿರುವ ಕಡತಕ್ಕೆ ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು ಹಾಗೂ ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂಬುದರ ಸಂಪೂರ್ಣ ಮಾಹಿತಿ ನೀಡುವಂತೆ ಮಾನ್ಯ ಮುಖ್ಯಮಂತ್ರಿಯವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ** : 2023-24 ಮತ್ತು 2024-25ನೇ ಸಾಲುಗಳಲ್ಲಿ ಮಂಡ್ಯ ಜಿಲ್ಲೆಯ ವಿವಿಧ ವಿಧಾನ ಸಭಾ ಮತ ಕ್ಷೇತ್ರಗಳಿಗೆ ವಿವಿಧ ಇಲಾಖೆಗಳಡಿ ಸನ್ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಒಟ್ಟಾರೆ ರೂ.150.00 ಕೋಟಿಗಳನ್ನು ಒದಗಿಸಲಾಗಿರುತ್ತದೆ. ಮಾನ್ಯ ಶಾಸಕರುಗಳ ಕೋರಿಕೆಯಂತೆ ವಿವಿಧ ಇಲಾಖೆಗಳಡಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿರುತ್ತದೆ. ನಗರಾಭಿವೃದ್ಧಿ ಇಲಾಖೆಯಡಿ ಮಂಡ್ಯ ವಿಧಾನ ಸಭೆ ಕ್ಷೇತ್ರದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಮೂಲಭೂತ ಸೌಕರ್ಯ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಾನ್ಯ ಶಾಸಕರುಗಳ ಮನವಿಯ ಮೇರೆಗೆ ರೂ.9.00 ಕೋಟಿಗಳ ಎಸ್. ಎಫ್. ಸಿ ವಿಶೇಷ ಅನುದಾನವನ್ನು ಒದಗಿಸಲಾಗಿರುತ್ತದೆ.

ಮುಂದುವರೆದು, ಪ್ರಸ್ತುತ ಮಂಡ್ಯ ಜಿಲ್ಲೆಯ ವಿವಿಧ ಪಟ್ಟಣ ಪಂಚಾಯಿತಿ / ಪುರಸಭೆ / ನಗರಸಭೆಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ಅನುದಾನ ಕೋರಿರುವ ಪ್ರಸ್ತಾವನೆಯು ಕಡತ ಸಂಖ್ಯೆ:UDD/233/SFC/2024 ದಿನಾಂಕ:13.12.2024ರಂದು ಆರ್ಥಿಕ ಇಲಾಖೆಯಲ್ಲಿ ಸ್ವೀಕೃತಗೊಂಡಿದ್ದು, ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. ಕಾಲಕಾಲಕ್ಕೆ ಲಭ್ಯವಾಗುವ ಆರ್ಥಿಕ ಸಂಪನ್ಮೂಲಗಳನ್ನು ಆಧರಿಸಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ವಿವಿಧ ಇಲಾಖೆಗಳಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಮಂಜೂರಾತಿ ನೀಡಲು ಪರಿಶೀಲಿಸಲಾಗುವುದು.

ಸಂಖ್ಯೆ: ಆಇ 743 ವೆಚ್ಚ-9/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ